# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

6

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 15/12/20

---

### ಸಭಾಪತಿಗೆ ಆಯನೂರು ಪತ್ರ

ಉವಾ 15/12/20

**ಬೆಂಗಳೂರು:** ವಿಧಾನ ಪರಿಷತ್ ಕಲಾಪದಲ್ಲಿ ತಮ್ಮ ವಿರುದ್ಧ ನೀಡಿರುವ ಅವಿಶ್ವಾಸ ನಿರ್ಣಯ ಮಂಡನೆಗೆ ಅವಕಾಶ ನೀಡಬೇಕು. ಅಲ್ಲದೇ ತಾವು ನೀಡಿರುವ ಹಿಂಬರಹ ತಿರಸ್ಕರಿಸುವುದಾಗಿ ಬಿಜೆಪಿ ಸದಸ್ಯ ಆಯನೂರು ಮಂಜುನಾಥ ವಿಧಾನ ಪರಿಷತ್ ಸಭಾಪತಿ ಕೆ.ಪ್ರತಾಪಚಂದ್ರ ಶೆಟ್ಟಿಗೆ ಪತ್ರ ಬರೆದಿದ್ದಾರೆ. ನಿಯಮಾನುಸಾರವೇ ಅವಿಶ್ವಾಸ ನಿರ್ಣಯ ಮಂಡನೆಗೆ ಸೂಚನೆ ನೀಡಲಾಗಿದೆ. ಆದರೂ, ಸಭಾಪತಿಯವರ ವಿರುದ್ಧದ ಆರೋಪಗಳು ನಿಖರವಾಗಿಲ್ಲ ಹಾಗೂ ನಿರ್ಣಯದ ಪತ್ರದೊಂದಿಗೆ ಉಲ್ಲೇಖಿಸಲಾಗಿಲ್ಲ ಎಂದು ವಿಧಾನ ಪರಿಷತ್ ಕಾರ್ಯದರ್ಶಿ ಹಿಂಬರಹ ಪತ್ರ ಕಳುಹಿಸಿರುವುದನ್ನು ತಿರಸ್ಕರಿಸಿದ್ದು ನವೆಂಬರ್ 25ರಂದು ನೀಡಿದ ಅವಿಶ್ವಾಸ ಸೂಚನೆಯನ್ನು ಸದನದಲ್ಲಿ ಮಂಡಿಸಲು ಅವಕಾಶ ನೀಡಬೇಕೆಂದು ಆಗ್ರಹಿಸಿದ್ದಾರೆ.